ಇ) ಈ ಬಾಬ್ತಿಗಾಗಿ ಸದರಿ ಮೂರು ವರ್ಷಗಳಲ್ಲಿ ವೆಚ್ಚ ಮಾಡದೆ ಇರುವ ಹಣ ರೂ. 29.95 ಲಕ್ಷಗಳಾಗಿದ್ದು, ಆರ್ಥಿಕ ವರ್ಗಕ್ಕೆ ಅಂತ್ಯ ಗೊಂಡಂತೆ ಲುಪ್ತವಾಗಿರುತ್ತದೆ. ಆದುದರಿಂದ ಈ ಹಣವನ್ನು ಖರ್ಚು ಮಾಡಲು ಬರುವುದಿಲ್ಲ.

ಧಾರವಾಡ ಜಿಲ್ಲೆಯಲ್ಲಿ ಹನಿ ನೀರಾವರಿ ಸಬ್ಸಿಡಿ ಹಣ ದುರುಪಯೋಗ

2991 - ಶ್ರೀ ಬಸವರಾಜು ಹೆಚ್.ಡಿ. (ವಿರಾಜಪೇಟೆ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡ ಜಿಲ್ಲೆಯಲ್ಲಿ ಹನಿ ನೀರಾವರಿಗೆಂದು ನೀಡಿದ ಸಬ್ಸಿಡಿ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ದುರುಪಯೋಗವಾಗಿರುವ ಹಣವೆಷ್ಟು? ಹಣ ದುರುಪಯೋಗಕ್ಕೆ ಕಾರಣರಾದವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು)*

ಶ್ರೀ ಡಿ. ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಹೌದು.

ಆ) ರೂ. 7.30 ಲಕ್ಷ ಸರ್ಕಾರಿ ಹಣ ದುರುಪಯೋಗವಾಗಿದ್ದು ಈ ಅವ್ಯವಹಾರಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ಸರ್ಕಾರಿ ಹಣ ದುರುಪಯೋಗದ ಹಿನ್ನಲೆಯಡಿ ಅಮಾನತ್ತು ಗೊಳಿಸಿ ಇಲಾಖಾ ವಿಚಾರಣೆಗೆ ಕ್ರಮಕೈಗೊಂಡಿದೆ.

ರಾಜ್ಯದಲ್ಲಿ ಶೈತ್ಯಾಗಾರಗಳ ಸ್ಥಾಪನೆ

2992 - ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ 1994 ರಿಂದೀಚೆಗೆ ಎಷ್ಟು ಶೈತ್ಯಾಗಾರಗಳನ್ನು ಸ್ಥಾಪಿಸಲಾಗಿದೆ? (ಅವುಗಳ ವಿವರ ನೀಡುವುದು)*

ಆ) *ರಾಜ್ಯದಲ್ಲಿ ಇನ್ನೂ ಎಷ್ಟು ಕೇಂದ್ರಗಳಲ್ಲಿ ಶೈತ್ಯಾಗಾರಗಳ ಸ್ಥಾಪನೆ ಮಾಡಲಿದೆ? ಅವುಗಳಿಗೆ ಎಷ್ಟು ಹಣ ಮೀಸಲಿಡಲಾಗಿದೆ? ಹಾಗೂ ಎಷ್ಟು ಸಮಯದಲ್ಲಿ ಕೆಲಸ ಪೂರ್ಣಗೊಳಿಸಲಾಗುವುದು?*

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ರಾಜ್ಯದಲ್ಲಿ 1994ರಿಂದೀಚೆಗೆ 8 ಶೈತ್ಯಾಗಾರಗಳನ್ನು ತೋಟಗಾರಿಕೆ ಉತ್ಪನ್ನಗಳ ಶೇಖರಣೆಗಾಗಿ ನಿರ್ಮಿಸಲಾಗಿದೆ. ಅವುಗಳ ವಿವರ ಕೆಳಕಂಡಂತಿದೆ :